# ಕರ್ನಾಟಕ ವಿಧಾನಪರಿಷತ್

## ಶ್ರೀ ಟಿ. ಎ. ಶರವಣ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುರವರು ನಿಯಮ-72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ

**ಪ್ರಶ್ನೆ:**

ರಾಜ್ಯದ ಮಾನ್ಯ ಮುಖ್ಯಮಂತ್ರಿಗಳು ಅನುಮೋದಿಸಿದಂತೆ ಹಾಗೂ ಆರ್ಥಿಕ ಇಲಾಖೆಯ ಸಹಮತಿಯಂತೆ ರಾಮನಗರ ಮತ್ತು ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರಗಳ ಪ್ರವಾಸೋದ್ಯಮ ಇಲಾಖೆಯ ರಾಜ್ಯದ ಗೌರವಾನ್ವಿತ ಮಾನ್ಯ ಮಾಜಿ ಮುಖ್ಯಮಂತ್ರಿಗಳಾದ ದಿ|| ಕೆಂಗಲ್ ಹನುಮಂತಯ್ಯರವರ ಸಮಾಧಿ ಸ್ಥಳಕ್ಕೆ ಹೊಂದಿಕೊಂಡಿರುವ ಕೆಂಗಲ್ ಧಾರ್ಮಿಕ ಕ್ಷೇತ್ರದ ಅಭಿವೃದ್ಧಿ ಮತ್ತು ಮೂಲಭೂತ ಸೌಕರ್ಯಗಳ ಕಾಮಗಾರಿಗಳು ಹಾಗೂ ರಾಮನಗರ ಪ್ರಸಿದ್ಧ ಧಾರ್ಮಿಕ ಸ್ಥಳವಾದ ದಕ್ಷಿಣ ಅಯೋಧ್ಯೆ ಎಂದು ಹೆಸರುವಾಸಿಯಾಗಿರುವ ಶ್ರೀ ರಾಮದೇವರ ಬೆಟ್ಟವು ಪುರಾಣ ಪ್ರಸಿದ್ಧವಾಗಿದ್ದು, ಶ್ರೀ ರಾಮದೇವರು ವನವಾಸದ ಕಾಲದಲ್ಲಿ ವಿಶ್ರಾಂತಿಗೆಂದು ಇಲ್ಲಿಗೆ ಬಂದು ನೆಲೆಸಿದ್ದರು ಎಂದು ಐತಿಹ್ಯವಿರುವ ಈ ಕ್ಷೇತ್ರಗಳ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಕಾಮಗಾರಿಗಳನ್ನು ಕೈಗೊಳ್ಳಲು ಪ್ರವಾಸೋದ್ಯಮ ಇಲಾಖೆಯು ಮೊದಲನೇ ಕಂತಿನ ಹಣ ಬಿಡುಗಡೆ ಮಾಡದಿರುವ ಹಿನ್ನಲೆಯಲ್ಲಿ ಕಾಮಗಾರಿಗಳು ಕುಂಠಿತಗೊಂಡಿರುವ ವಿಷಯದ ಬಗ್ಗೆ ಮಾನ್ಯ ಪ್ರವಾಸೋದ್ಯಮ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

**ಉತ್ತರ:**

ರಾಜ್ಯದ ನಿಕಟ ಪೂರ್ವ ಸನ್ಮಾನ್ಯ ಮುಖ್ಯಮಂತ್ರಿಗಳು ಅನುಮೋದಿಸಿದಂತೆ ಹಾಗೂ ಆರ್ಥಿಕ ಇಲಾಖೆಯ ಸಹಮತಿಯಂತೆ ಪ್ರವಾಸೋದ್ಯಮ ಇಲಾಖೆಯಿಂದ ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಮಂಜೂರಾಗಿರುವ ಹಾಗೂ ರಾಮನಗರ ಜಿಲ್ಲೆಯ ರಾಮನಗರ ವಿಧಾನಸಭಾ ಕ್ಷೇತ್ರದ ಶ್ರೀ ರೇವಣಸಿದ್ದೇಶ್ವರ ಬೆಟ್ಟದಲ್ಲಿ ಸರ್ಕಾರದ ಆದೇಶ ದಿನಾಂಕ: 21.02.2023ರಲ್ಲಿ ಮಂಜೂರಾಗಿರುವ ಹಾಗೂ ದಿನಾಂಕ: 03.03.2023 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುವ ಕಾಮಗಾರಿಗಳ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಿದೆ.

ಆದರೆ, ಅನುದಾನದ ಕೊರತೆಯಿಂದ ಕಳೆದ ಸಾಲಿನಲ್ಲಿ ಈ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲು ಸಾಧ್ಯವಾಗಿರುವುದಿಲ್ಲ.

ಪ್ರಸ್ತುತ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ/1/ಟಿಎಫ್‌ಪಿ/2023, ದಿನಾಂಕ: 31.07.2023 ರಲ್ಲಿನ ಅಂಶಗಳ ಕ್ರಮ ಸಂಖ್ಯೆ: 3ರಲ್ಲಿ ಹಿಂದಿನ ಸರ್ಕಾರದಿಂದ ಅನುಮೋದನೆಗೊಂಡು ಇನ್ನೂ ಪ್ರಾರಂಭವಾಗದಿರುವ (Unstarted) ಕಾಮಗಾರಿಗಳ ಬಗ್ಗೆ ಸಂಬಂಧಪಟ್ಟ ಸಚಿವರ ಅನುಮೋದನೆಯೊಂದಿಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳಲು ಆಡಳಿತ ಇಲಾಖೆಯ ಕಾರ್ಯದರ್ಶಿಗಳಿಗೆ ಕ್ರಮವಹಿಸಲು ತಿಳಿಸಲಾಗಿರುತ್ತದೆ. ಅದರಂತೆ, ರಾಮನಗರ ಜಿಲ್ಲೆಯ ರಾಮನಗರ ಹಾಗೂ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾಗಿರುವ ಮೇಲ್ಕಂಡ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡುವ ಕುರಿತು ಲಭ್ಯತೆಗನುಗುಣವಾಗಿ ಕ್ರಮವಹಿಸಲಾಗುವುದು.

ಉಲ್ಲಂಘನೆಯ ನಿರ್ದಿಷ್ಟವಾದ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಯಾವುದಾದರೂ ಅಂಥ ಘಟನೆಯನ್ನು ಅಥವಾ ಉಲ್ಲಂಘನೆಯನ್ನು ಗಮನಕ್ಕೆ ತಂದಲ್ಲಿ, ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

TOR 102 TDV 2024

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

# ಅನುಬಂಧ

## ರಾಮನಗರ ಜಿಲ್ಲೆಯ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿನ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಹಾಗೂ ರಾಮನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಶ್ರೀ ರೇವಣ ಸಿದ್ದೇಶ್ವರ ಬೆಟ್ಟದಲ್ಲಿ ಮಂಜೂರಾಗಿರುವ ಕಾಮಗಾರಿಗಳ ವಿವರ

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆಯ ವಿವರ | ಅಂದಾಜು ಮೊತ್ತ | ಅನುಷ್ಠಾನ ಸಂಸ್ಥೆ |
|---|---|---|---|
| | **ಸರ್ಕಾರದ ಆದೇಶ ಸಂಖ್ಯೆ : ಟಿಒಆರ್ 197 ಟಿಡಿಪಿ 2020(2). ದಿ : 21.02.2023** | | |
| 1 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಮಕ್ಕಳ ಉದ್ಯಾನವನ ಅಭಿವೃದ್ಧಿ ಕಾಮಗಾರಿ. | 50.00 | ಕೆ.ಆರ್.ಐ.ಡಿ.ಎಲ್. - 4 |
| 2 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಉದ್ಯಾನವನ ಅಭಿವೃದ್ಧಿ ಕಾಮಗಾರಿ. | 50.00 | ಕೆ.ಆರ್.ಐ.ಡಿ.ಎಲ್. - 4 |
| 3 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಪಾರ್ಕಿಂಗ್ ನಿರ್ಮಾಣ ಕಾಮಗಾರಿ. | 100.00 | ಕೆ.ಆರ್.ಐ.ಡಿ.ಎಲ್. - 4 |
| 4 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಸಿ.ಸಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ. | 50.00 | ಕೆ.ಆರ್.ಐ.ಡಿ.ಎಲ್. - 4 |
| 5 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಶೌಚಾಲಯ ನಿರ್ಮಾಣ. | 50.00 | ಕೆ.ಆರ್.ಐ.ಡಿ.ಎಲ್. - 4 |
| 6 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಸ್ನಾನಗೃಹ ಮತ್ತು ಮುಡಿಗೃಹ ನಿರ್ಮಾಣ ಕಾಮಗಾರಿ. | 50.00 | ಕೆ.ಆರ್.ಐ.ಡಿ.ಎಲ್. - 4 |
| 7 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ. | 50.00 | ಕೆ.ಆರ್.ಐ.ಡಿ.ಎಲ್. - 4 |
| 8 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ನೆಲಹಾಸು ಅಳವಡಿಕೆ ಕಾಮಗಾರಿ. | 50.00 | ಕೆ.ಆರ್.ಐ.ಡಿ.ಎಲ್. - 4 |
| 9 | ರಾಮನಗರ ಜಿಲ್ಲೆ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶ್ರೀ ಕೆಂಗಲ್ ಆಂಜನೇಯ ದೇವಸ್ಥಾನದ ವ್ಯಾಪ್ತಿಯಲ್ಲಿ ಸೌರದೀಪ ಅಳವಡಿಕೆ ಕಾಮಗಾರಿ | 50.00 | ಕೆ.ಆರ್.ಐ.ಡಿ.ಎಲ್. - 4 |
| | **ಸರ್ಕಾರದ ಆದೇಶ ಸಂಖ್ಯೆ: ಟಿಒಆರ್/197/ಟಿಡಿಪಿ/2020 (ಭಾ.1), ದಿನಾಂಕ: 21.02.2023** | | |
| 10 | ರಾಮನಗರ ಜಿಲ್ಲೆ, ರಾಮನಗರ ವಿಧಾನಸಭಾ ಕ್ಷೇತ್ರ ಶ್ರೀ ರೇವಣ ಸಿದ್ದೇಶ್ವರ ಬೆಟ್ಟದಲ್ಲಿ ಲಿಫ್ಟ್ ಅಳವಡಿಕೆ ಕಾಮಗಾರಿ. | 200.00 | ಕೆ.ಆರ್.ಐ.ಡಿ.ಎಲ್. - 4 |
| 11 | ರಾಮನಗರ ಜಿಲ್ಲೆ, ರಾಮನಗರ ವಿಧಾನಸಭಾ ಕ್ಷೇತ್ರ ಶ್ರೀ ರೇವಣ ಸಿದ್ದೇಶ್ವರ ಬೆಟ್ಟದಲ್ಲಿ ಸೋಲಾರ್ ಲೈಟ್ ಹಾಗೂ ಇತರ ಮೂಲಭೂತ ಸೌಕರ್ಯ ಕಾಮಗಾರಿ. | 50.00 | ಕೆ.ಆರ್.ಐ.ಡಿ.ಎಲ್. - 4 |
| 12 | ರಾಮನಗರ ಜಿಲ್ಲೆ, ರಾಮನಗರ ವಿಧಾನಸಭಾ ಕ್ಷೇತ್ರ ಶ್ರೀ ರಾಮದೇವರ ಬೆಟ್ಟದಲ್ಲಿ ಹ್ಯಾಂಡ್ ರೈಲ್ ಮತ್ತು ರಸ್ತೆ ಅಭಿವೃದ್ಧಿ. | 200.00 | ಕೆ.ಆರ್.ಐ.ಡಿ.ಎಲ್. - 4 |
| | **ಒಟ್ಟು** | **950.00** | |